# All India Radio: Bangalore
# National Bulletin In Kannada
# 24.03.2026 07.35 a.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**<><><><>**

ಮುಖ್ಯಾಂಶಗಳು

1. ಪಶ್ಚಿಮ ಏಷ್ಯಾ ಸಂಘರ್ಷ ; ಭಾರತದ ದೃಢ ನಿರ್ಧಾರ ಮತ್ತು ಬಿಕ್ಕಟ್ಟು ನಿರ್ವಹಣಾ ಸಾಮರ್ಥ್ಯಕ್ಕೆ ಜಾಗತಿಕ ಮನ್ನಣೆ ; ಪ್ರಧಾನಿ ನರೇಂದ್ರ ಮೋದಿ
2. ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್-ಅಮೆರಿಕ ವಿದೇಶಾಂಗ ಕಾರ್ಯದರ್ಶಿಗಳ ನಡುವೆ ದೂರವಾಣಿ ಸಂಭಾಷಣೆ ; ಇಂಧನ ಭದ್ರತೆ ಕುರಿತು ವಿಚಾರ ವಿನಿಮಯ
3. ಅಸ್ಸಾಂ, ಕೇರಳಂ ಮತ್ತು ಪುದುಚೇರಿ ವಿಧಾನಸಭಾ ಚುನಾವಣೆ ; ಇಂದು ನಾಮಪತ್ರಗಳ ಪರಿಶೀಲನೆ
4. ಒಡಿಶಾದ ಭುವನೇಶ್ವರದಲ್ಲಿಂದು ರಾಷ್ಟ್ರೀಯ ಒಳಾಂಗಣ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್‌ಗೆ ಚಾಲನೆ

<><><><>

ಪಶ್ಚಿಮ ಏಷ್ಯಾದಲ್ಲಿನ ಉದ್ವಿಗ್ನತೆಯ ಸಂದರ್ಭದಲ್ಲಿ ಭಾರತದ ವಿಧಾನ, ಸಂಬಂಧಗಳನ್ನು ಗಟ್ಟಿಗೊಳಿಸುವಲ್ಲಿ, ನಿರ್ಣಾಯಕ ಕ್ರಮ ಕೈಗೊಳ್ಳುವಲ್ಲಿ ಮತ್ತು ಬಿಕ್ಕಟ್ಟುಗಳನ್ನು ಪರಿಣಾಮಕಾರಿಯಾಗಿ ನಿರ್ವಹಿಸುವಲ್ಲಿ ದೇಶದ ಸಾಮರ್ಥ್ಯವನ್ನು ಪ್ರದರ್ಶಿಸಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ನವದೆಹಲಿಯಲ್ಲಿ ನಿನ್ನೆ ಖಾಸಗಿ ಮಾಧ್ಯಮ ಸಮೂಹವೊಂದು ಆಯೋಜಿಸಿದ್ದ ಶೃಂಗಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಫೆಬ್ರವರಿ ೨೮ ರಿಂದ ಜಾಗತಿಕ ಅನಿಶ್ಚಿತತೆ ಇದ್ದರೂ, ಭಾರತವು ಆತ್ಮವಿಶ್ವಾಸ ಮತ್ತು ಅಭಿವೃದ್ಧಿಯ ದೃಢ ಸಂಕಲ್ಪದೊಂದಿಗೆ ಮುನ್ನಡೆಯುತ್ತಿದೆ. ದೇಶವು ಇನ್ನು ಮುಂದೆ ಸವಾಲುಗಳಿಂದ ಹಿಂದೆ ಸರಿಯುವುದಿಲ್ಲ, ಬದಲಿಗೆ ಅವುಗಳನ್ನು ನೇರವಾಗಿ ಎದುರಿಸುತ್ತಿದೆ. ಯುದ್ಧದಂತಹ ಕಠಿಣ ಸಂದರ್ಭಗಳಲ್ಲಿಯೂ ಸಹ ಜಗತ್ತು ಭಾರತದ ನೀತಿಗಳು, ಕಾರ್ಯತಂತ್ರದ ಚಿಂತನೆ ಮತ್ತು ಸಾಮರ್ಥ್ಯಗಳನ್ನು ಗುರುತಿಸುತ್ತಿದೆ ಎಂದು ತಿಳಿಸಿದರು. ಗಲ್ಫ್ ರಾಷ್ಟ್ರಗಳಿಂದ ಹಿಡಿದು ಜಾಗತಿಕ ಪಶ್ಚಿಮ, ಜಾಗತಿಕ ದಕ್ಷಿಣ ಮತ್ತು ತನ್ನ ನೆರೆಯ ರಾಷ್ಟ್ರಗಳವರೆಗೆ ಭಾರತವು ಎಲ್ಲಾ ಪ್ರದೇಶಗಳಲ್ಲಿ ವಿಶ್ವಾಸಾರ್ಹ ಪಾಲುದಾರನಾಗಿ ಹೊರಹೊಮ್ಮಿದೆ ಎಂದ ಪ್ರಧಾನಿ, ನಾಗರಿಕರಿಗೆ ಆಗುವ ತೊಂದರೆಗಳನ್ನು ಕಡಿಮೆ ಮಾಡಲು ಸರ್ಕಾರವು ಅಗತ್ಯವಿರುವ ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುತ್ತಿದೆ. ಇಂಧನ, ರಸಗೊಬ್ಬರಗಳು ಮತ್ತು ಅಗತ್ಯ ವಸ್ತುಗಳ ಲಭ್ಯತೆಯನ್ನು ಖಚಿತಪಡಿಸಿಕೊಳ್ಳಲಾಗುತ್ತಿದೆ ಎಂದು ಭರವಸೆ ನೀಡಿದರು. ನಾಗರಿಕರ ಪಾತ್ರವನ್ನು ಶ್ಲಾಘಿಸಿದ ಪ್ರಧಾನಿ, ೧೪೦ ಕೋಟಿ ಜನರ ಸಾಮೂಹಿಕ ಪ್ರಯತ್ನಗಳು ಬಿಕ್ಕಟ್ಟಿನ ಸಮಯದಲ್ಲಿಯೂ ರಾಷ್ಟ್ರವನ್ನು ಮುನ್ನಡೆಸುತ್ತಿವೆ ಮತ್ತು ಇದರಿಂದಾಗಿ ಆರ್ಥಿಕತೆಯು ವೇಗವಾಗಿ ಬೆಳೆಯುತ್ತಿದೆ ಎಂದು ತಿಳಿಸಿದರು.

<><><><>

ವಿದೇಶಾಂಗ ವ್ಯವಹಾರಗಳ ಸಚಿವ ಡಾ. ಎಸ್ ಜೈಶಂಕರ್ ನಿನ್ನೆ ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊ ರೂಬಿಯೊ ಅವರೊಂದಿಗೆ ದೂರವಾಣಿ ಸಂಭಾಷಣೆ ನಡೆಸಿದರು. ಈ ಕುರಿತು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ತಮ್ಮ ಚರ್ಚೆಗಳು ಪ್ರಮುಖವಾಗಿ ಪಶ್ಚಿಮ-ಏಷ್ಯಾ ಸಂಘರ್ಷ ಮತ್ತು ಅಂತಾರಾಷ್ಟ್ರೀಯ ಆರ್ಥಿಕತೆಯ ಮೇಲೆ ಅದರ ಪ್ರಭಾವದ ಮೇಲೆ ಕೇಂದ್ರೀಕೃತವಾಗಿದ್ದವು ಎಂದು ತಿಳಿಸಿದ್ದಾರೆ. ಇದರೊಂದಿಗೆ ಉಭಯ ನಾಯಕರು ಇಂಧನ ಭದ್ರತೆಯ ಕಾಳಜಿಗಳ ಬಗ್ಗೆಯೂ ಮಾತನಾಡಿದ್ದಾರೆ ಎಂದು ಸಚಿವ ಡಾ. ಜೈಶಂಕರ್ ತಿಳಿಸಿದ್ದಾರೆ. ವಿದೇಶಾಂಗ ವ್ಯವಹಾರಗಳ ಸಚಿವರು ನಿನ್ನೆ ಸೌದಿ ಅರೇಬಿಯಾ ಮತ್ತು ಯುನೈಟೆಡ್ ಅರಬ್ ಎಮಿರೇಟ್ಸ್ ಸೇರಿದಂತೆ ಗಲ್ಫ್ ಸಹಕಾರ ಮಂಡಳಿ - ಜಿಸಿಸಿಯ ಸದಸ್ಯ ರಾಷ್ಟ್ರಗಳ ರಾಯಭಾರಿಗಳನ್ನು ಭೇಟಿ ಮಾಡಿದರು. ಸೌದಿ ಅರೇಬಿಯಾ ಮತ್ತು ಯುಎಇಗಳಲ್ಲಿಯೇ ಸುಮಾರು ಎಂಟು ದಶಲಕ್ಷ ಭಾರತೀಯರು ವಾಸಿಸುತ್ತಿದ್ದಾರೆ. ಈ ಸಭೆಯಲ್ಲಿ ಬಹ್ರೇನ್, ಓಮನ್, ಕುವೈತ್ ಮತ್ತು ಕತಾರ್ ದೇಶಗಳ ರಾಯಭಾರಿಗಳು ಸಹ ಭಾಗವಹಿಸಿದ್ದರು. ತಾವು ಮತ್ತು ಆರು ರಾಯಭಾರಿಗಳು ಪಶ್ಚಿಮ ಏಷ್ಯಾದ ಸಂಘರ್ಷದ ಕುರಿತು ವಿಚಾರ ವಿನಿಮಯ ಮಾಡಿಕೊಂಡಿರುವುದಾಗಿ ಸಚಿವರು ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ. ಈ ಪ್ರದೇಶದಲ್ಲಿನ ಭಾರತೀಯ ಸಮುದಾಯಕ್ಕೆ ನೀಡುತ್ತಿರುವ ನಿರಂತರ ಬೆಂಬಲಕ್ಕಾಗಿ ಸಚಿವರು, ರಾಯಭಾರಿಗಳಿಗೆ

ಧನ್ಯವಾದ ಅರ್ಪಿಸಿದರು. ಇದಕ್ಕೂ ಮುನ್ನ, ಡಾ.ಎಸ್.ಜೈಶಂಕರ್ ಶ್ರೀಲಂಕಾದ ವಿದೇಶಾಂಗ ಸಚಿವ ವಿಜಿತ ಹೇರತ್ ಅವರೊಂದಿಗೆ ಮಾತನಾಡಿ, ಪಶ್ಚಿಮ ಏಷ್ಯಾ ಸಂಘರ್ಷದ ಪರಿಣಾಮಗಳ ಬಗ್ಗೆ ಚರ್ಚಿಸಿದರು. ಭಾರತ 'ನೆರೆಹೊರೆಗೆ ಮೊದಲು' ಮತ್ತು 'ವಿಷನ್ ಸಾಗರ್' ನೀತಿಗಳಿಗೆ ಬದ್ಧವಾಗಿದೆ ಎಂದು ಪುನರುಚ್ಚರಿಸಿದರು.

<><><>

ಅಸ್ಸಾಂ, ಕೇರಳಂ ಮತ್ತು ಪುದುಚೇರಿ ವಿಧಾನಸಭಾ ಚುನಾವಣೆಗಾಗಿ ಸಲ್ಲಿಸಲಾಗಿರುವ ನಾಮಪತ್ರಗಳ ಪರಿಶೀಲನಾ ಪ್ರಕ್ರಿಯೆಯು ಇಂದು ನಡೆಯಲಿದೆ. ಈ ರಾಜ್ಯಗಳಲ್ಲಿ ನಾಮಪತ್ರ ಸಲ್ಲಿಕೆಯ ಅವಧಿಯು ನಿನ್ನೆ ಮುಕ್ತಾಯಗೊಂಡಿದ್ದು, ಉಮೇದುವಾರಿಕೆಯನ್ನು ಹಿಂಪಡೆಯಲು ಈ ಗುರುವಾರ ಕೊನೆಯ ದಿನವಾಗಿದೆ. ಈ ಎರಡು ರಾಜ್ಯಗಳು ಮತ್ತು ಒಂದು ಕೇಂದ್ರಾಡಳಿತ ಪ್ರದೇಶವಾದಲ್ಲಿ ಮುಂದಿನ ತಿಂಗಳು ೯ ರಂದು ಒಂದೇ ಹಂತದಲ್ಲಿ ಮತದಾನ ನಡೆಯಲಿದೆ. ತಮಿಳುನಾಡು ವಿಧಾನಸಭಾ ಚುನಾವಣೆ ಮತ್ತು ಪಶ್ಚಿಮ ಬಂಗಾಳದ ಮೊದಲ ಹಂತದ ಚುನಾವಣೆಗೆ ಸಂಬಂಧಿಸಿದ ಅಧಿಸೂಚನೆಯನ್ನು ಇದೇ ೩೦ ರಂದು ಹೊರಡಿಸಲಾಗುವುದು. ತಮಿಳುನಾಡಿನಲ್ಲಿ ಏಪ್ರಿಲ್ ೨೩ ರಂದು ಒಂದೇ ಹಂತದಲ್ಲಿ ಮತದಾನ ನಡೆಯಲಿದೆ. ಇನ್ನು ಪಶ್ಚಿಮ ಬಂಗಾಳದಲ್ಲಿ ಏಪ್ರಿಲ್ ೨೩ ಮತ್ತು ೨೯ ರಂದು ಎರಡು ಹಂತಗಳಲ್ಲಿ ಮತದಾನ ಪ್ರಕ್ರಿಯೆ ನಡೆಯಲಿದ್ದು, ಎರಡನೇ ಹಂತದ ಮತದಾನಕ್ಕಾಗಿ ಏಪ್ರಿಲ್ ೨ ರಂದು ಅಧಿಸೂಚನೆ ಹೊರಡಿಸಲಾಗುವುದು. ನಾಲ್ಕೂ ರಾಜ್ಯಗಳು ಮತ್ತು ಒಂದು ಕೇಂದ್ರಾಡಳಿತ ಪ್ರದೇಶದ ಚುನಾವಣಾ ಫಲಿತಾಂಶಕ್ಕಾಗಿ ಮತ ಎಣಿಕೆಯು ಮೇ ೪ ರಂದು ನಡೆಯಲಿದೆ.

<><><>

ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆಯ ಹಿನ್ನೆಲೆಯಲ್ಲಿ, ಚುನಾವಣಾ ಆಯೋಗ ವಿಶೇಷ ತೀವ್ರ ಪರಿಷ್ಕರಣೆ ಎಸ್ಐಆರ್ ಪ್ರಕ್ರಿಯೆ ನಂತರ ಮೊದಲ ಪೂರಕ ಮತದಾರರ ಪಟ್ಟಿಯನ್ನು ನಿನ್ನೆ ರಾತ್ರಿ ಪ್ರಕಟಿಸಿದೆ. ಸರ್ವೋಚ್ಚನ್ಯಾಯಾಲಯದ ನಿರ್ದೇಶನದಂತೆ ನ್ಯಾಯಾಂಗ ಅಧಿಕಾರಿಗಳಿಂದ ಪರಿಶೀಲನೆಗೊಳಗಾದ ಮತದಾರರ ಹೆಸರುಗಳನ್ನು ಈ ಪಟ್ಟಿಯಲ್ಲಿ ಸೇರ್ಪಡೆಗೊಳಿಸಲಾಗಿದ್ದು, ಪ್ರತಿ ಮತಗಟ್ಟೆಗೆ ಸಂಬಂಧಿಸಿದ ಪಟ್ಟಿ ಆಯೋಗದ ಅಧಿಕೃತ ಜಾಲತಾಣದಲ್ಲಿ ಲಭ್ಯವಿದೆ. ಈ ಕುರಿತು ಮಾಹಿತಿ ನೀಡಿರುವ ರಾಜ್ಯದ ಮುಖ್ಯ ಚುನಾವಣಾಧಿಕಾರಿ ಮನೋಜ್ ಕುಮಾರ್ ಅಗರ್ವಾಲ್, ಈವರೆಗೆ ಸುಮಾರು ೨೯ ಲಕ್ಷ ಮತದಾರರ ದಾಖಲೆಗಳನ್ನು ಪರಿಶೀಲಿಸಿ ವಿಲೇವಾರಿ ಮಾಡಲಾಘಿದೆ. ಪ್ರಸ್ತುತ ಪ್ರಕಟವಾಗಿರುವ ಮೊದಲ ಪೂರಕ ಪಟ್ಟಿಯಲ್ಲಿ ಎಷ್ಟು ಹೆಸರುಗಳನ್ನು ಹೊಸದಾಗಿ ಸೇರಿಸಲಾಗಿದೆ ಮತ್ತು ಎಷ್ಟು ಹೆಸರುಗಳನ್ನು ಕೈ ಬಿಡಲಾಗಿದೆ ಎಂಬ ನಿಖರ ಮಾಹಿತಿ ಇನ್ನಷ್ಟೇ ಲಭ್ಯವಾಗಬೇಕಿದೆ ಎಂದರು.

<><><>

ಮುಂಬರುವ ವಿಧಾನಸಭಾ ಚುನಾವಣೆಯನ್ನು ಹಿಂಸಾಚಾರ ಮುಕ್ತ ಪಾರದರ್ಶಕ ಮತ್ತು ನ್ಯಾಯ ಸಮ್ಮತವಾಗಿ ನಡೆಸುವ ನಿಟ್ಟಿನಲ್ಲಿ ಭಾರತೀಯ ಚುನಾವಣಾ ಆಯೋಗ ಪಶ್ಚಿಮ ಬಂಗಾಳದಲ್ಲಿ ನಿನ್ನೆ ಜಿಲ್ಲಾ ಚುನಾವಣಾಧಿಕಾರಿಗಳು ಹಾಗೂ ಪೊಲೀಸ್ ವರಿಷ್ಠಾಧಿಕಾರಿಗಳೊಂದಿಗೆ ಮಹತ್ವದ ಪರಿಶೀಲನಾ ಮತ್ತು ತರಬೇತಿ ಅಧಿವೇಶನ ನಡೆಸಿದರು. ವರ್ಚುವಲ್ ಮೂಲಕ ನಡೆದ ಈ ಸಭೆಯಲ್ಲಿ ರಾಜ್ಯದ ಕಾನೂನು ಸುವ್ಯವಸ್ಥೆ ಮತ್ತು ಆಡಳಿತಾತ್ಮಕ ಸಿದ್ಧತೆಗಳನ್ನು ಪರಿಶೀಲಿಸಲಾಯಿತು. ಯಾವುದೇ ರೀತಿಯ ಬೆದರಿಕೆ ಅಥವಾ ಆಮಿಷಗಳಿಗೆ ಅವಕಾಶವಿಲ್ಲದಂತೆ ಶಾಂತಿಯುತ ಮತದಾನ ಪ್ರಕ್ರಿಯೆಯನ್ನು ಖಚಿತಪಡಿಸಿಕೊಳ್ಳಲು ಅಧಿಕಾರಿಗಳಿಗೆ ಸೂಚನೆ ನೀಡಲಾಯಿತು.

<><><>

ಅಮೆರಿಕದ ರಕ್ಷಣಾ ಇಲಾಖೆಯ ನೀತಿ ವಿಭಾಗದ ಉಪ ಕಾರ್ಯದರ್ಶಿ ಎಲ್‌ಬ್ರಿಡ್ಜ್ ಕಾಲ್ಬಿ, ಶೀಘ್ರದಲ್ಲೇ ಭಾರತಕ್ಕೆ ಭೇಟಿ ನೀಡಲಿದ್ದಾರೆ ಎಂದು ಭಾರತಕ್ಕೆ ಅಮೆರಿಕ ರಾಯಭಾರಿ ಸರ್ಗಿಯೊ ಗಾರ್, ತಿಳಿಸಿದ್ದಾರೆ. ಉಪ ಕಾರ್ಯದರ್ಶಿ ಕಾಲ್ಬಿ ಅವರ ಮೊದಲ ಅಧಿಕೃತ ಭಾರತ ಭೇಟಿ ಇದಾಗಿದ್ದು, ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಆಡಳಿತದ ೨ನೇ ಅವಧಿಯಲ್ಲಿ ಅಮೆರಿಕದ ರಕ್ಷಣಾ ಮತ್ತು ಯುದ್ಧ ನೀತಿಯನ್ನು ರೂಪಿಸುವಲ್ಲಿ ಅವರು ಪ್ರಮುಖ ಪಾತ್ರ ವಹಿಸಿದ್ದಾರೆ. ಪಶ್ಚಿಮ ಏಷ್ಯಾದಲ್ಲಿ ಉದ್ವಿಗ್ನತೆ ಹೆಚ್ಚುತ್ತಿರುವ ಈ ಸಂದರ್ಭದಲ್ಲಿ ನೀಡಿತ್ತುರುವ ಈ ಭೇಟಿ ರಾಜತಾಂತ್ರಿಕವಾಗಿ ಮಹತ್ವ ಪಡೆದಿದೆ.

<><><>

ಇರಾನ್ ತೈಲದ ಮೇಲಿನ ನಿರ್ಬಂಧಗಳನ್ನು ತಾತ್ಕಾಲಿಕವಾಗಿ ಸಡಿಲಗೊಳಿಸಿರುವ ತಮ್ಮ ನಿರ್ಧಾರವನ್ನು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಸಮರ್ಥಿಸಿಕೊಂಡಿದ್ದಾರೆ. ಈ ಕ್ರಮ ಜಾಗತಿಕ ಇಂಧನ ಮಾರುಕಟ್ಟೆಗೆ ಗರಿಷ್ಠ ಪ್ರಮಾಣದ ತೈಲ ಪೂರೈಕೆಯನ್ನು ಖಚಿತಪಡಿಸಲಿದೆ ಎಂದು ಅವರು ತಿಳಿಸಿದ್ದಾರೆ. ಫ್ಲೋರಿಡಾದಲ್ಲಿ ಮಾತನಾಡಿರುವ ಅವರು, ಪಶ್ಚಿಮ ಏಷ್ಯಾದಲ್ಲಿ ಸಂಘರ್ಷ ಮುಂದುವರಿದಿರುವ ಈ ಸಂದರ್ಭದಲ್ಲಿ ಜಾಗತಿಕ ತೈಲ ಪೂರೈಕೆಯಲ್ಲಿ ಸ್ಥಿರತೆ ಕಾಯ್ದುಕೊಳ್ಳುವುದು ಈ ನಿರ್ಧಾರದ ಮುಖ್ಯ ಉದ್ದೇಶವಾಗಿದೆಯೇ ಹೊರತು ಇರಾನ್‌ಗೆ ಆರ್ಥಿಕ ಲಾಭ ಮಾಡಿಕೊಡುವುದಲ್ಲ ಎಂದು ಸ್ಪಷ್ಟಪಡಿಸಿದರು. ಅಮೆರಿಕ ಕಳೆದ ಶುಕ್ರವಾರ ಏಪ್ರಿಲ್ ೧೯ರವರೆಗೆ ಇರಾನ್ ಮೂಲದ ಕಚ್ಚಾತೈಲ ಮತ್ತು ಪೆಟ್ರೋಲಿಯಂ ಉತ್ಪನ್ನಗಳ ಮಾರಾಟಕ್ಕೆ ಅನುಮತಿ ನೀಡಿದ್ದು, ಅಮೆರಿಕಗೂ ಇರಾನ್ ತೈಲವನ್ನು ಆಮದು ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.

<><><><>

ಅಮೆರಿಕದೊಂದಿಗೆ ಯಾವುದೇ ರೀತಿಯ ಮಾತುಕತೆಗಳು ನಡೆದಿಲ್ಲ ಎಂದು ಇರಾನ್ ಸಂಸತ್ತಿನ ಸ್ಪೀಕರ್ ಮೊಹಮ್ಮದ್ ಬಾಗೇರ್ ಕಾಲಿಬಾಫ್ ಸ್ಪಷ್ಟಪಡಿಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣದಲ್ಲಿ ಪ್ರತಿಕ್ರಿಯಿಸಿರುವ ಅವರು, ಎರಡೂ ರಾಷ್ಟ್ರಗಳ ನಡುವಿನ ಮಾತುಕತೆಯ ಕುರಿತ ವರದಿಗಳು ಸತ್ಯಕ್ಕೆ ದೂರವಾಗಿದ್ದು, ಆರ್ಥಿಕ ಮತ್ತು ತೈಲ ಮಾರುಕಟ್ಟೆಯನ್ನು ನಿಯಂತ್ರಿಸಲು ಹಾಗೂ ಅಮೆರಿಕ ಮತ್ತು ಇಸ್ರೇಲ್ ಸಿಲುಕಿರುವ ಸಂಕಷ್ಟದಿಂದ ಪಾರಾಗಲು ಇಂತಹ ತಂತ್ರಗಳನ್ನು ಬಳಸಲಾಗುತ್ತದೆ ಎಂದು ತಿಳಿಸಿದ್ದಾರೆ. ಇರಾನ್ ಮಾತುಕತೆಗೆ ಉತ್ಸುಕವಾಗಿದ್ದು, ಅಮೆರಿಕ ಪ್ರತಿನಿಧಿಗಳು ಇರಾನ್‌ನ ನಾಯಕರೊಬ್ಬರೊಂದಿಗೆ ಚರ್ಚಿಸುತ್ತಿದ್ದಾರೆ ಎಂಬ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಹೇಳಿಕೆ ಬೆನ್ನಲ್ಲೇ ಸ್ಪೀಕರ್ ಮೊಹಮ್ಮದ್ ಬಾಗೇರ್ ಕಾಲಿಬಾಫ್ ಹೇಳಿಕೆ ನೀಡಿದ್ದಾರೆ.

<><><><>

ಒಡಿಶಾದ ಭುವನೇಶ್ವರದ ಕಳಿಂಗ ಕ್ರೀಡಾಂಗಣದಲ್ಲಿ ಇಂದು ರಾಷ್ಟ್ರೀಯ ಒಳಾಂಗಣ ಅಥ್ಲೆಟಿಕ್ಸ್ ಚಾಂಪಿಯನ್‌ಶಿಪ್‌ಗೆ ಚಾಲನೆ ದೊರೆಯಲಿದೆ. ಎರಡು ದಿನಗಳ ಈ ಕ್ರೀಡಾಕೂಟದಲ್ಲಿ ೯೭ ಮಹಿಳೆಯರು ಸೇರಿದಂತೆ ೨೭೮ ಸ್ಪರ್ಧಿಗಳು ಭಾಗವಹಿಸಲಿದ್ದಾರೆ. ಹಿರಿಯ ಮತ್ತು ೨೦ ವರ್ಷದೊಳಗಿನವರ ವಿಭಾಗಗಳಲ್ಲಿ ಸ್ಪರ್ಧೆ ನಡೆಯಲಿದೆ. ೨೦೨೬ ರ ಆವೃತ್ತಿಯಲ್ಲಿ ಪ್ರಮುಖವಾಗಿ ಒಡಿಶಾದ ಉದಯೋನ್ಮುಖ ಓಟಗಾರ ಅನಿಮೇಶ್ ಕುಜುರ್ ಪುರುಷರ ೬೦ ಮೀಟರ್ ಓಟದಲ್ಲಿ ಸ್ಪರ್ಧಿಸಲಿದ್ದಾರೆ. ಅಂತಾರಾಷ್ಟ್ರೀಯ ಮಟ್ಟದ ಪಟು ತಮಿಳುನಾಡಿನ ಪ್ರವೀಣ್ ಚಿತ್ರವೇಲ್ ಪುರುಷರ ಲಾಂಗ್ ಜಂಪ್‌ನಲ್ಲಿ ಭಾಗವಹಿಸಲಿದ್ದಾರೆ.

<><><><>

ಐಜ್ವಾಲ್‌ನ ರಾಜೀವ್ ಗಾಂಧಿ ಕ್ರೀಡಾಂಗಣದಲ್ಲಿ ನಡೆಯಲಿರುವ ಬಹುನಿರೀಕ್ಷಿತ ಇಂಡಿಯನ್ ಫುಟ್‌ಬಾಲ್ ಲೀಗ್ ೨೦೨೫-೨೬ರ ಐಜ್ವಾಲ್ ಡರ್ಬಿಯಲ್ಲಿ ಐಜ್ವಾಲ್ ಎಫ್‌ಸಿ ಮತ್ತು ಚನ್ಮರಿ ಎಫ್‌ಸಿ ಫುಟ್ಬಾಲ್ ತಂಡಗಳು ಇಂದು ಮುಖಾಮುಖಿಯಾಗಲಿವೆ. ಪಂದ್ಯವು ಭಾರತೀಯ ಕಾಲಮಾನ ಸಂಜೆ ೬:೩೦ ಕ್ಕೆ ಆರಂಭವಾಗಲಿದೆ.

<><><><>

ನ್ಯೂಯಾರ್ಕ್‌ನ ಲಾಗಾರ್ಡಿಯಾ ವಿಮಾನ ನಿಲ್ದಾಣದಲ್ಲಿ ಸಂಭವಿಸಿದ ಅಪಘಾತದಲ್ಲಿ ಇಬ್ಬರು ಪೈಲಟ್‌ಗಳು ಸಾವನ್ನಪ್ಪಿದ್ದಾರೆ. ಕೆಲ ಗಾಯಗೊಂಡ ಪ್ರಯಾಣಿಕರ ಅನುಕೂಲಕ್ಕಾಗಿ ಏರ್ ಕೆನಡಾ ಮುಖ್ಯ ಕಾರ್ಯನಿರ್ವಾಹಕಾಧಿಕಾರಿ ಮೈಕೆಲ್ ರೂಸೋ ಸಹಾಯವಾಣಿ ಮತ್ತು ಸಹಾಯಕ್ಕಾಗಿ ವಿಶೇಷ ತಂಡವನ್ನು ರಚಿಸಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>